8	ಕಿರಿಯ ಪ್ರಯೋಗ ಶಾಲಾ ತಂತ್ರಜ್ಞ	1	1	0
9	ಎಕ್ಸ್‌ರೇ ತಂತ್ರಜ್ಞ	1	1	0
10	ನೇತ್ರ ಸಹಾಯಕರು	1	1	0
11	ಚಾಲಕರು	2	1	1
12	ಗ್ರೂಪ್ – ಡಿ	12	4	8
	ಒಟ್ಟು	**35**	**14**	**21**

ಮಾಗಡಿ ತಾಲ್ಲೂಕಿನ ಹೊಸಪಾಳ್ಯ ಮತ್ತು ಅಜ್ಜನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆ

378 (743) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಮನಗರ ಜಿಲ್ಲೆ ಮಾಗಡಿ ತಾಲ್ಲೂಕಿನ ಹೊಸಪಾಳ್ಯ ಮತ್ತು ಅಜ್ಜನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲು ಯಾವಾಗ ಸರ್ಕಾರದಿಂದ ಆದೇಶ ಆಗಿದೆ; ಇದರ ರೂಪುರೇಶೆಗಳೇನು;

ಆ) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸದಿರಲು ಕಾರಣಗಳೇನು;

ಇ) ಎಷ್ಟು ದಿನದಲ್ಲಿ ಈ ಆಸ್ಪತ್ರೆಗಳನ್ನು ಪ್ರಾರಂಭಿಸಲಾಗುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ರಾಮನಗರ ಜಿಲ್ಲೆ ಮಾಗಡಿ ತಾಲ್ಲೂಕಿನ ಹೊಸಪಾಳ್ಯ ಮತ್ತು ಅಜ್ಜನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸರ್ಕಾರಿ ಆದೇಶ ದಿನಾಂಕ: 04/10/2007 ರಲ್ಲಿ ಮಂಜೂರು ಮಾಡಲಾಗಿದೆ. ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು, ಈ ಕೆಳಕಂಡ 3 ನಿಬಂಧನೆಗಳನ್ನು ವಿಧಿಸಲಾಗಿತ್ತು.

1. ಸ್ಥಳೀಯ ಗ್ರಾಮಸ್ಥರು ಒಂದು ವರ್ಷದೊಳಗೆ ರೂ.1 ಲಕ್ಷ ವಂತಿಗೆ ನೀಡಬೇಕು.
2. ಎರಡು ಎಕರೆ ಜಮೀನು ನೀಡಬೇಕು.
3. ಉಚಿತ ತಾತ್ಕಾಲಿಕ ಕಟ್ಟಡ ನೀಡಬೇಕು.

ಆ) ಅಜ್ಜನಹಳ್ಳಿ ಗ್ರಾಮಸ್ಥರು ಮೇಲಿನ 3 ನಿಬಂಧನೆಗಳನ್ನು ಪೂರೈಸಿರುವುದರಿಂದ ಅಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಅನುಮತಿಯನ್ನು ಈಗಾಗಲೇ ನೀಡಲಾಗಿದೆ.

ಹೊಸಪಾಳ್ಯ ಪ್ರಾಥಮಿಕ ಆರೋಗ್ಯ ಕೇಂದ್ರದ ಗ್ರಾಮಸ್ಥರು ನಿಬಂಧನೆಗಳನ್ನು ಪೂರೈಸಿಲ್ಲದ ಕಾರಣ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಲು ಅನುಮತಿ ನೀಡಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೀದರ್ ಮೆಡಿಕಲ್ ಕಾಲೇಜಿನ ವೈದ್ಯ & ಸಿಬ್ಬಂದಿ ವೇತನ

379 (609) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್–ದಕ್ಷಿಣ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಮೆಡಿಕಲ್ ಕಾಲೇಜು ಯಾವಾಗ ಪ್ರಾರಂಭವಾಯಿತು;

ಆ) ಕಾಲೇಜು ಪ್ರಾರಂಭವಾದಾಗಿನಿಂದ ಯಾವ ಯಾವ ವರ್ಗದಡಿಯಲ್ಲಿ ವೈದ್ಯರು ಮತ್ತು ಇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ; (ಪೂರ್ಣ ವಿವರಗಳನ್ನು ನೀಡುವುದು);

ಇ) ವೈದ್ಯರು ಮತ್ತು ಇತರೆ ಸಿಬ್ಬಂದಿಗಳನ್ನು ಯಾವ ಆಧಾರದ ಮೇಲೆ ನೇಮಿಸಿಕೊಳ್ಳಲಾಗಿದೆ;

ಈ) ಬೀದರ್ ಮೆಡಿಕಲ್ ಕಾಲೇಜಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರಿಗೆ ಸರ್ಕಾರ ವೇತನ ಭರಿಸುತ್ತಿದೆಯೇ ಅಥವಾ ಗುತ್ತಿಗೆದಾರರ ಮೂಲಕ ಭರಿಸಲಾಗುತ್ತಿದೆಯೇ;

ಉ) ಬೀದರ್ ಮೆಡಿಕಲ್ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಗುತ್ತಿಗೆದಾರರು ಸರಿಯಾಗಿ ವೇತನ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;